ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ 01 ಸಿಡಿಟಿಪಿ 2017-18 16634

ನಿರ್ದೇಶಕರ ಕಛೇರಿ
ಅರಮನೆ ರಸ್ತೆ
ಬೆಂಗಳೂರು 560 001
ದಿ: 22-03-2019

-:ಸುತ್ತೋಲೆ:-

ವಿಷಯ: 2019-20ನೇ ಸಾಲಿನಿಂದ ರಾಜ್ಯದ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್ ಮುಖಾಂತರ ಸಿಡಿಟಿಪಿ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ.

ಉಲ್ಲೇಖ: ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಇವರು ದಿನಾಂಕ:22-03-2019ರಂದು ನೀಡಿದ ಮೌಖಿಕ ಸೂಚನೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೇಂದ್ರ ಸರ್ಕಾರದ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯದಡಿಯ ಸಿಡಿಟಿಪಿ ಯೋಜನೆಯನ್ನು(Community Development Through Polytechnic) 2019-20ನೇ ಸಾಲಿನಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ರಾಜ್ಯದ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಅನುಷ್ಠಾನಗೊಳಿಸುವ ಸಲುವಾಗಿ, ದಿನಾಂಕ:28-3-2019ರೊಳಗಾಗಿ ನಿರ್ದೇಶನಾಲಯಕ್ಕೆ ತ್ರಿ-ಪ್ರತಿಗಳಲ್ಲಿ ಕಡ್ಡಾಯವಾಗಿ ಪ್ರಸ್ತಾವನೆಯನ್ನು ಸಲ್ಲಿಸಲು ಈ ಮೂಲಕ ಸೂಚಿಸಲಾಗಿದೆ.

ಸದರಿ ಯೋಜನೆಯನ್ನು ಹೊಸದಾಗಿ ಪ್ರಾರಂಭಿಸುವ ಸಂಸ್ಥೆಗಳ ಪ್ರಾಚಾರ್ಯರುಗಳು, ಈಗಾಗಲೇ ಸಿಡಿಟಿಪಿ ಯೋಜನೆಯನ್ನು ಅನುಷ್ಠಾನಗೊಳಿಸಿರುವ ಸಂಸ್ಥೆಗಳ ಪ್ರಾಚಾರ್ಯರಿಂದ, ಸಲಹೆ ಹಾಗೂ ಮಾರ್ಗದರ್ಶನವನ್ನು ಪಡೆದು ತಪ್ಪದೆ ಪ್ರಸ್ತಾವನೆಯನ್ನು ಸಲ್ಲಿಸಲು ಈ ಮೂಲಕ ತಿಳಿಸಲಾಗಿದೆ.

ನಿರ್ದೇಶಕರು

ಇವರಿಗೆ:

1. ರಾಜ್ಯದ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
2. ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, 2ನೇ ಮಹಡಿ, ಬೆಂಗಳೂರು ಇವರಿಗೆ ಡಿಟಿಇ ವೆಬ್ ಸೈಟ್ ನಲ್ಲಿ ಪ್ರಕಟಿಸಲು ಮುಂದಿನ ಕ್ರಮಕ್ಕಾಗಿ.